# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2758 |
| ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 28.03.2022 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ, ಮಡಿಕೇರಿ ಮತ್ತು ವಿರಾಜಪೇಟೆ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಎಷ್ಟು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ; ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ವಿವರ ನೀಡುವುದು) | ಕೊಡಗು ಜಿಲ್ಲೆಯ, ಮಡಿಕೇರಿ ಮತ್ತು ವಿರಾಜಪೇಟೆ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಯಾವುದೇ ಆಸ್ಪತ್ರೆಗಳನ್ನು ಮೇಲ್ದರ್ಜೇಗೇರಿಸಿರುವುದಿಲ್ಲ. |
| ಆ) | ಕೊಡಗು ಜಿಲ್ಲೆಯ, ಮಡಿಕೇರಿ ಮತ್ತು ವಿರಾಜಪೇಟೆ ಕ್ಷೇತ್ರದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ದುರಸ್ಥಿ ಮಾಡಲು ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆ ಆಗಿದೆ? (ತಾಲ್ಲೂಕುವಾರು ವಿವರ ನೀಡುವುದು | ಕರ್ನಾಟಕ ಸರ್ಕಾರವು 2021-22ನೇ ಸಾಲಿನಲ್ಲಿ 75ನೇ ಸ್ವಾತಂತ್ರ್ಯದ ಅಮೃತ ಮಹೋತ್ಸವ ದಿನಾಚರಣೆಯ ಅಂಗವಾಗಿ ರಾಜ್ಯದಲ್ಲಿ ಆರೋಗ್ಯ ಕೇಂದ್ರಗಳ ಮೂಲ ಸೌಕರ್ಯಗಳನ್ನು ವಿಸ್ತರಣೆ ಮತ್ತು ಉನ್ನತೀಕರಣಕ್ಕಾಗಿ "ಅಮೃತ ಆರೋಗ್ಯ ಮೂಲ ಸೌಕರ್ಯ ಉನ್ನತೀಕರಣ ಯೋಜನೆ" ಯಡಿ ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ಕ್ಷೇತ್ರದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಮೂಲ ಸೌಕರ್ಯ ಉನ್ನತೀಕರಿಸಲು ನಿರ್ಧರಿಸಿ 25 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ತಲಾ ರೂ.20.00 ಲಕ್ಷಗಳಿಗೆ ಅನುಮೋದನೆ ನೀಡಿ ಅನುಷ್ಠಾನ ಗೊಳಿಸುವಂತೆ ಆದೇಶಿಸಲಾಗಿರುತ್ತದೆ.<br><br>ಅದರಂತೆ, ಕೊಡಗು ಜಿಲ್ಲೆಯ, ಮಡಿಕೇರಿ ಮತ್ತು ವಿರಾಜಪೇಟೆ ಕ್ಷೇತ್ರದ ವ್ಯಾಪ್ತಿಯಲ್ಲಿ 30 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪೈಕಿ 25 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ತಲಾ ರೂ.20.00 ಲಕ್ಷಗಳಂತೆ ಒಟ್ಟು ರೂ.500.00 ಲಕ್ಷಗಳಿಗೆ ಕಾಮಗಾರಿಗಳನ್ನು ಅನುಷ್ಠಾನ ಗೊಳಿಸಲಾಗುತ್ತಿರುತ್ತದೆ. ಪ್ರಸಕ್ತ ಸಂದರ್ಭದಲ್ಲಿ ಸದರಿ ಕಾಮಗಾರಿಗಳು ಪ್ರಾರಂಭಗೊಂಡಿದ್ದು, ಪ್ರಗತಿಯ |

| | | |
|---|---|---|
| | | ಹಂತದಲ್ಲಿರುತ್ತವೆ. ವಿವರವನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ.<br><br>ಅನುದಾನದ ಹಾಗೂ ವೆಚ್ಚದ ವಿವರವನ್ನು **ಅನುಬಂಧ-2** ರಲ್ಲಿ ನೀಡಲಾಗಿದೆ. |

**ಕಡತ ಸಂಖ್ಯೆ: ಆಕುಕ 102 ಎಸ್.ಬಿ.ವಿ. 2022**

**(ಡಾ|| ಕೆ. ಸುಧಾಕರ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**
**ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು**